**<u>ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ , ಉಡುಪಿ ಜಿಲ್ಲೆ , ಉಡುಪಿ</u>**

**<u>ಸ್ಪೆಷಲ್ ಕೇಸ್ ನಂಃ 78/2022</u>** <u>ಪಿ.ಡಬ್ಲ್ಯೂ 6</u>

<u>ಸಿ.ಡಬ್ಲ್ಯೂ.6</u>

| | |
|---|---|
| ಸಾಕ್ಷಿದಾರರ ಹೆಸರು | ಅಕ್ಷೇಂದ್ರ |
| ತಂದೆಯ ಹೆಸರು | ಶಂಕರ ಮರಕಾಲ |
| ವಯಸ್ಸು | 34 ವರ್ಷ |
| ಉದ್ಯೋಗ | ವ್ಯಾಪಾರ |
| ವಿಳಾಸ | ಕೊಕ್ಕರ್ಣೆ |

ದಿನಾಂಕಃ 06-03-2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು

**<u>ಮುಖ್ಯ ವಿಚಾರಣೆಃ ಸರಕಾರಿ ಅಭಿಯೋಜಕರಿಂದ</u>**

1) ನನಗೆ ನ್ಯಾಯಾಲಯದ ಮುಂದೆ ಇರುವ ಆರೋಪಿತರು ಮತ್ತು ಮೃತ 6 ನೇ ಆರೋಪಿ ಗೊತ್ತು. ಅವರನ್ನು ದಸ್ತಗಿರಿ ಮಾಡಿದ್ದ ಬಗ್ಗೆ ಗೊತ್ತಿಲ್ಲ. ನನ್ನ ಸಹಿಯನ್ನು ನೋಡಿದರೆ ಗುರುತಿಸಬಲ್ಲೆ. ನನಗೆ ಈಗ ತೋರಿಸಿದ ಪಂಚನಾಮೆಯಲ್ಲಿರುವ ಸಹಿ ನನ್ನದೇ ಇದೆ. ಪಂಚನಾಮೆಯನ್ನು **ನಿಶಾನೆ ಪಿ-8** ಎಂದು, ನನ್ನ ಸಹಿಯನ್ನು ನಿಶಾನೆ ಪಿ-8(ಎ) ಎಂದು ಗುರುತಿಸಿದ್ದೇನೆ. ಆ ಸಹಿಯನ್ನು 4-5 ವರ್ಷಗಳ ಹಿಂದೆ ಬ್ರಹ್ಮಾವರ ಠಾಣೆಯಲ್ಲಿ ಮಾಡಿದ್ದೆ. ಆ ಸಹಿಯನ್ನು ಯಾವ ಕಾರಣಕ್ಕೆ ಪಡೆದಿದ್ದರು ಎಂದು ಗೊತ್ತಿಲ್ಲ. ಆಗ ನಾನು ಆರೋಪಿತರನ್ನು ಠಾಣೆಯಲ್ಲಿ ನೋಡಿಲ್ಲ.

**( ಈ ಹಂತದಲ್ಲಿ ಸರಕಾರಿ ಅಭಿಯೋಜಕರ ವಿನಂತಿಯ ಮೇರೆಗೆ ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟಿಸವಾಲು ಮಾಡಲು ಅವಕಾಶ ಕೋರಿದ್ದು ಸರಕಾರಿ ಅಭಿಯೋಜಕರಿಗೆ ಪಾಟೀಸವಾಲಿಗೆ ಅನುಮತಿ ಕೊಡಲಾಯಿತು)**

**<u>ಪಾಟಿಸವಾಲುಃ ಸರಕಾರಿ ಅಭಿಯೋಜಕರಿಂದಃ</u>**

1) ತಾರೀಕು 16-05-2022 ರಂದು ಬ್ರಹ್ಮಾವರ ಪೊಲೀಸರು ಚಾಸಾ-16 ಇವರ ಸೂಚನೆಯಂತೆ ಅವರ ಕಚೇರಿಗೆ ಆರೋಪಿತರನ್ನು ಪತ್ತೆ ಮಾಡಿ, ಕರೆತಂದಾಗ,

ಆಗ ಅಲ್ಲಿ ಚಾಸಾ-7 ಸಹ ಇದ್ದರು ಎಂದರೆ ಗೊತ್ತಿಲ್ಲ. ಅಲ್ಲಿ ಪೊಲೀಸರು ಆರೋಪಿತರನ್ನು ದಸ್ತಗಿರಿ ಮಾಡಿದ್ದಕ್ಕಾಗಿ ನಿಪಿ-8 ರ ಪಂಚನಾಮೆ ಬರೆದು, ಓದಿ ಹೇಳಿ ನನ್ನ ಸಹಿ ಪಡೆದಿದ್ದರು ಎಂದರೆ ಸರಿಯಲ್ಲ. ಆರು ಜನ ಆರೋಪಿತರು ನಮ್ಮ ಊರಿನವರೆಂದು, ಈಗ ಅವರೊಂದಿಗೆ ರಾಜೀ ಮಾಡಿಕೊಂಡು, ನಿಪಿ-8 ರ ವಿಷಯತಿಳಿದಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀಸವಾಲುಃ ಆರೋಪಿತರ ಪರ ಶ್ರೀ ಎಸ್. ಎಸ್.ಎನ್. ವಕೀಲರಿಂದ ಇಲ್ಲ ಎಂದು ಸಲ್ಲಿಸಿದ್ದಾರೆ**

-ಮರು ವಿಚಾರಣೆ - ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)
ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದರು.

(ಕೆ.ಎಸ್. ಗಂಗಣ್ಣವರ್)
ಪ್ರಧಾನ ಜಿಲ್ಲಾ ಮತ್ತು ಸತ್ರ /ವಿಶೇಷ ನ್ಯಾಯಾಧೀಶರು,
ಉಡುಪಿ.